ಶಾಸನ ರಚನೆ

ಉ) ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ ವಿಧೇಯಕ,2009

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):- ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ,

" 2009ರ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ ವಿಧೇಯಕ"ವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಸ್. ಸುರೇಶ್‌ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರ ಗಳ ಸಚಿವರು) :- ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೆನೆ.

ಅಧ್ಯಕ್ಷರು :- ವಿಧೇಯಕವನ್ನು ಮಂಡಿಸಲಾಗಿದೆ.

ಅಧ್ಯಕ್ಷರು :- ಈಗ ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು. ಎರಡು ವಿದೇಯಕಗಳಿವೆ. ಅವುಗಳ ಮೇಲೆ ಚರ್ಚೆ ಪ್ರಾರಂಬ ಮಾಡಬೇಕು. ನಾಳೆ ತೆಗೆದುಕೊಳ್ಳುವುದಾದರೆ ತೆಗೆದುಕೊಳ್ಳೋಣ. ಪರ್ಯಾಲೋಚನೆ ಮಾಡಿ ಚರ್ಚೆ ಬೇಕಾದರೆ ನಾಳೆ ಇಟ್ಟುಕೊಳ್ಳೋಣ.

ಶ್ರೀ ಮಲ್ಲಿಕಾರ್ಜುನ ಖರ್ಗೆ (ಮಾನ್ಯ ವಿರೋಧ ಪಕ್ಷದ ನಾಯಕರು):- ಪ್ರಸ್ತಾವನೆ ಈಗ ಮಾಡಿದ್ದಾರೆ. ನಾಳೆ ಚರ್ಚೆ ಮಾಡೋಣ.

ಅಧ್ಯಕ್ಷರು :- ಕಾನೂನು ವಿಶ್ವವಿದ್ಯಾಲಯದ ವಿಧೇಯಕ ಈಗ ಮಂಡನೆ ಆಗಿದೆ, ಈಗಲೇ ಚರ್ಚೆ ಮಾಡಿ ಬಿಲ್ ಪಾಸ್ ಮಾಡುವುದಾದರೆ ಮಾಡೋಣ. ನಾಳೆ ಇಟ್ಟುಕೊಳ್ಳೋಣ ಎಂದರೆ ಆಯಿತು.